ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ, ಬೆಂಗಳೂರು

ಸಂ: ಸ.ಅ/ವಾ-181/ಪಿ.ಆರ್/181-1/2022-23 ದಿನಾಂಕ : 18-06-2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಂಕ :21-09-2020 ರವರ ಆದೇಶದಂತೆ ದಿನಾಂಕ :18-06-2022 ರಂದು ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :18-06-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಶಿರಗಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ರಾಘವೇಂದ್ರಭಟ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಕುಮಾರಸ್ವಾಮಿ ಬಡಾವಣೆ 16ನೇ ಅಡ್ಡರಸ್ತೆಯಲ್ಲಿರುವ ಉಧ್ಯಾನವನಕ್ಕೆ ಚೈನ್ ಲಿಂಕ್ ಅಳವಡಿಸುವಂತೆ ಸಾರ್ವಜನಿಕರು ಕೋರಿದಾಗ ಚೈನ್‌ಲಿಂಕ್ ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2) 15 ಎಫ್ ಬಸ್ ನಿಲ್ದಾಣ ಹಂತದ ಪಾದಚಾರಿ ಮಾರ್ಗವನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿದಾಗ ವಾರ್ಡ್ ಅಭಿಯಂತರರು ಕೂಡಲೇ ಸರಿಪಡಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

3) ಪರಿಸರ ದಿನದ ಅಂಗವಾಗಿ ವಾರ್ಡ್ ಪ್ರದೇಶದಲ್ಲಿ ಗಿಡಗಳನ್ನು ನೆಡುವಂತೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ ಹಾಗೂ ಸ್ವಯಂ ಸೇವಾ ಸಂಘದವರು ಉಚಿತ ಸಸಿಗಳನ್ನು ನೀಡಲು ಸಿದ್ದರಿದ್ದು, ಸದರಿ ಸಸಿಗಳನ್ನು ಕನ್ನಿಕಾ ಪರಮೇಶ್ವರಿ ದೇವಸ್ಥಾನದ ಹಿಂಭಾಗದಲ್ಲಿ ನೆಡಲು ತೋಟಗಾರಿಕೆ ಇಲಾಖೆಯವರಿಗೆ ಅಧ್ಯಕ್ಷರು ಸೂಚಿಸಿದರು.

4) 17ನೇ ಮುಖ್ಯರಸ್ತೆಯಲ್ಲಿರುವ ಖಾಲಿ ನಿವೇಶನವನ್ನು ಸ್ವಚ್ಛಗೊಳಿಸುವಂತೆ ಸಾರ್ವಜನಿಕರು ಕೋರಿದಾಗ ಅಧ್ಯಕ್ಷರು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

5) ವಾರ್ಡ್ ಸಂಖ್ಯೆ-181 ರಲ್ಲಿ ಇಂಗುಗುಂಡಿಗಳನ್ನು ನಿರ್ಮಿಸಿಕೊಡುವಂತೆ ಸಭೆಯಲ್ಲಿ ಕೋರಿದಾಗ ಪ್ರಸ್ತುತ ಕಾರ್ಯಕ್ರಮ ಪಟ್ಟಿಯಲ್ಲಿ ಕೈಗೊಳ್ಳುವುದಾಗಿ ವಾರ್ಡ್ ಅಭಿಯಂತರರು ಮಾನ್ಯ ಅಧ್ಯಕ್ಷರ ಮುಖಾಂತರ ಸಭೆ ತಿಳಿಸಿರುತ್ತಾರೆ.

6) ವಾರ್ಡ್‌ನ ಪರಿಮಿತಿಯಲ್ಲಿ ಹೊಸದಾಗಿ ಸರ್ಕಾರಿ ಶಾಲೆಯೊಂದನ್ನು ನಿರ್ಮಾಣ ಮಾಡಬೇಕಾಗಿ ಸಾರ್ವಜನಿಕರು ಕೋರಿದಾಗ ಮಾನ್ಯ ಅಧ್ಯಕ್ಷರು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಯೋಜನೆ ದಕ್ಷಿಣ ರವರಿಗೆ ಸೂಚಿಸಿದರು.

7) ರಸ್ತೆಯ ಬೀದಿ ದೀಪಗಳಿಗೆ ಮರಗಳು ಅಡ್ಡಲಾಗಿದ್ದು, ಮರದ ಕೊಂಬೆಗಳನ್ನು ತೆರವು ಮಾಡುವಂತೆ ಕೋರಿರುವುದರಿಂದ ಮಾನ್ಯ ಅಧ್ಯಕ್ಷರು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

Scanned by CamScanner

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Raghavendra.T

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ

Scanned by CamScanner